# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **2339** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **21.03.2022** |
| **ಉತ್ತರಿಸಬೇಕಾದ ಸಚಿವರು** | : | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು** |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಂತ ಸರ್ಕಾರದ ಆರೋಗ್ಯ ಇಲಾಖೆ ವತಿಯಿಂದ ಒಟ್ಟು ಎಷ್ಟು ಡಯಾಲಿಸಿಸ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ; | ರಾಜ್ಯದ್ಯಂತ ಆರೋಗ್ಯ ಇಲಾಖೆ ವತಿಯಿಂದ ಒಟ್ಟು 167 ಡಯಾಲಿಸಿಸ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಸರ್ಕಾರದಿಂದ ಪ್ರಾರಂಭಿಸಲಾಗಿರುವ ಡಯಾಲಿಸಿಸ್ ಕೇಂದ್ರಗಳಲ್ಲಿ ಡಯಾಲಿಸಿಸ್ ಗೆ ಪ್ರತಿಯೊಬ್ಬ ರೋಗಿಗೆ ವಿಧಿಸಲಾಗಿರುವ ಶುಲ್ಕ ಎಷ್ಟು; | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಪ್ರಾರಂಭವಾಗಿರುವ ಡಯಾಲಿಸಿಸ್ ಕೇಂದ್ರಗಳಲ್ಲಿ ಡಯಾಲಿಸಿಸ್ ಸೇವೆಯನ್ನು ಉಚಿತವಾಗಿ ಒದಗಿಸಲಾಗುತ್ತಿದೆ. |
| ಇ) | ಈ ಕೇಂದ್ರಗಳ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ಗುತ್ತಿಗೆ ನೀಡಲಾಗುತ್ತಿದೆಯೇ; ಗುತ್ತಿಗೆ ನೀಡಲಾಗುತ್ತಿದ್ದಲ್ಲಿ, ಕಳೆದ ಐದು ವರ್ಷಗಳಲ್ಲಿ ಸರ್ಕಾರದ ಡಯಾಲಿಸಿಸ್ ಕೇಂದ್ರಗಳನ್ನು ಗುತ್ತಿಗೆ ಆಧಾರದಲ್ಲಿ ನಿರ್ವಹಿಸಿದ ಸಂಸ್ಥೆಗಳು ಯಾವುವು; ಹೆಸರು, ಗುತ್ತಿಗೆ ಅವಧಿ, ಆ ಸಂಸ್ಥೆಗೆ ಪಾವತಿಸಲಾದ ಮೊತ್ತ ಎಷ್ಟು; (ಸಂಪೂರ್ಣ ವಿವರ ನೀಡುವುದು) | ಹೌದು.<br>ಕಳೆದ ಐದು ವರ್ಷಗಳಲ್ಲಿ ಸರ್ಕಾರದ ಡಯಾಲಿಸಿಸ್ ಕೇಂದ್ರಗಳನ್ನು ಗುತ್ತಿಗೆ ಆಧಾರದಲ್ಲಿ ಈ ಕೆಳಕಂಡಂತ ಸಂಸ್ಥೆಗಳು ನಿರ್ವಹಿಸುತ್ತಿವೆ.<br>1) ಮೆ\|\| ಬಿ.ಆರ್.ಎಸ್. ಹೆಲ್ತ್ & ರಿಸರ್ಚ್ ಇನ್‌ಸ್ಟಿಟ್ಯೂಟ್ ಪ್ರೈ. ಲಿ, ಬೆಂಗಳೂರು.<br>2) ಮೆ\|\| ಎಸ್ಕಾಗ್ ಸಂಜೀವನಿ ಪ್ರೈ. ಲಿ, ಕೋಲ್ಕತ್ತಾ.<br>ಗುತ್ತಿಗೆ ಅವಧಿ ಮಾರ್ಚ್- 2017 ರಿಂದ ಮಾರ್ಚ್-2022.<br>1) ಮೆ\|\| ಬಿ.ಆರ್.ಎಸ್. ಹೆಲ್ತ್&ರಿಸರ್ಚ್ ಇನ್‌ಸ್ಟಿಟ್ಯೂಟ್ ಪ್ರೈ. ಲಿ, ಬೆಂಗಳೂರು ಸಂಸ್ಥೆಗೆ ಪಾವತಿಸಲಾದ ಮೊತ್ತ ರೂ.6642.81 ಲಕ್ಷಗಳು<br>2) ಮೆ\|\| ಎಸ್ಕಾಗ್ ಸಂಜೀವನಿ ಪ್ರೈ. ಲಿ, ಕೋಲ್ಕತ್ತಾ ಸಂಸ್ಥೆಗೆ ಪಾವತಿಸಲಾದ ಮೊತ್ತ ರೂ. 5420.45 ಲಕ್ಷಗಳು. |
| ಈ) | ಡಯಾಲಿಸಿಸ್ ಕೇಂದ್ರಗಳ ನಿರ್ವಹಣೆಗಾಗಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಅನುದಾನ ನೀಡಲಾಗುತ್ತಿದೆಯೇ; ಇದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಡಯಾಲಿಸಿಸ್ ಕೇಂದ್ರಗಳ ನಿರ್ವಹಣೆಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು;? (ವಿವರ ನೀಡುವುದು) | ಡಯಾಲಿಸಿಸ್ ಕೇಂದ್ರಗಳ ನಿರ್ವಹಣೆಗಾಗಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಅನುದಾನ ನೀಡಲಾಗುತ್ತಿದೆ.<br>ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಡಯಾಲಿಸಿಸ್ ಕೇಂದ್ರಗಳ ನಿರ್ವಹಣೆಗಾಗಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಈ ಕೆಳಕಂಡಂತಿದೆ.<br>2019-20 ರೂ. 2718.00 ಲಕ್ಷಗಳು<br>2020-21 ರೂ.2718.00 ಲಕ್ಷಗಳು<br>2021-22 ರೂ. 4554.00 ಲಕ್ಷಗಳು |

**ಸಂಖ್ಯೆ:** ಆಕುಕ 45 ಎಸ್.ಟಿ.ಕ್ಯೂ 2022

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು